# All India Radio: Bangalore
# National Bulletin In Kannada
# 28.08.2025  07.35 a.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ೧೫ನೇ ಭಾರತ-ಜಪಾನ್ ವಾರ್ಷಿಕ ಶೃಂಗಸಭೆಯಲ್ಲಿ ಭಾಗವಹಿಸಲು ಪ್ರಧಾನಿ ನರೇಂದ್ರ ಮೋದಿ ಇಂದು ಜಪಾನ್ ಗೆ ಭೇಟಿ; ರಕ್ಷಣೆ, ಭದ್ರತೆ, ಸೇರಿ ಹಲವು ವಿಷಯಗಳ ಕುರಿತು ಚರ್ಚೆ ನಿರೀಕ್ಷೆ
2. ಪ್ರಧಾನ ಮಂತ್ರಿ ಜನ್ ಧನ್ ಯೋಜನೆಗೆ ಇಂದು ೧೧ ವರ್ಷ; ವಿಷವರ್ತುಲದಿಂದ ಬಡವರ ವಿಮೋಚನೆಯನ್ನು ಆಚರಿಸುವ ಹಬ್ಬ ಪ್ರಧಾನಿ ಬಣ್ಣನೆ
3. ಜಮ್ಮು - ಉತ್ತರ ಪಂಜಾಬ್ ನಲ್ಲಿ ಮುಂದುವರಿದ ಪ್ರವಾಹ ಪರಿಸ್ಥಿತಿ: ಭಾರತೀಯ ವಾಯುಪಡೆಯಿಂದ ಪರಿಹಾರಕಾರ್ಯ ಮುಂದುವರಿಕೆ
4. ೨೦೩೦ರ ಕಾಮನ್ ವೆಲ್ತ್ ಕ್ರೀಡಾಕೂಟಕ್ಕೆ ಬಿಡ್ ಸಲ್ಲಿಸಲು ಕೇಂದ್ರ ಸಚಿವ ಸಂಪುಟ ಅನುಮೋದನೆ

<><><><>

೧೫ನೇ ಭಾರತ-ಜಪಾನ್ ವಾರ್ಷಿಕ ಶೃಂಗಸಭೆಯಲ್ಲಿ ಭಾಗವಹಿಸುವ ಸಂಬಂಧ ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಸಂಜೆ ಜಪಾನ್‌ಗೆ ಭೇಟಿ ನೀಡಲಿದ್ದಾರೆ. ಇದು ಜಪಾನ್‌ಗೆ ಪ್ರಧಾನಿ ನರೇಂದ್ರ ಮೋದಿಯವರ ಎಂಟನೇ ಭೇಟಿಯಾಗಿದ್ದು, ಪ್ರಧಾನಿ ಶಿಗೆರು ಇಶಿಬಾ ಅವರೊಂದಿಗಿನ ಮೊದಲ ಶೃಂಗಸಭೆಯಾಗಿದೆ. ಭೇಟಿಯ ಸಮಯದಲ್ಲಿ, ಉಭಯ ಪ್ರಧಾನಿಗಳು ರಕ್ಷಣೆ ಮತ್ತು ಭದ್ರತೆ, ವ್ಯಾಪಾರ ಮತ್ತು ಆರ್ಥಿಕತೆ, ತಂತ್ರಜ್ಞಾನ ಮತ್ತು ನಾವೀನ್ಯತೆ ಮತ್ತು ಜನರ ನಡುವಿನ ವಿನಿಮಯ ಸೇರಿದಂತೆ ಭಾರತ ಮತ್ತು ಜಪಾನ್ ನಡುವಿನ ವಿಶೇಷ ಕಾರ್ಯತಂತ್ರದ ಮತ್ತು ಜಾಗತಿಕ ಪಾಲುದಾರಿಕೆಯನ್ನು ಪರಿಶೀಲಿಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಇದೇ ವೇಳೆ, ಅವರು ಪ್ರಾದೇಶಿಕ ಮತ್ತು ಜಾಗತಿಕ ಪ್ರಾಮುಖ್ಯತೆಯ ವಿಷಯಗಳ ಬಗ್ಗೆಯೂ ಚರ್ಚಿಸಲಿದ್ದಾರೆ ಎಂದು ಮಾಹಿತಿ ನೀಡಿದೆ. ಈ ಭೇಟಿಯು ಉಭಯ ದೇಶಗಳ ನಡುವಿನ ದೀರ್ಘಕಾಲದ ವಿಶೇಷ ಸ್ನೇಹ ಬಂಧವನ್ನು ಪುನರುಚ್ಚರಿಸುತ್ತದೆ. ತಮ್ಮ ಭೇಟಿಯ ಎರಡನೇ ಚರಣದಲ್ಲಿ, ಚೈನಾದ ಅಧ್ಯಕ್ಷ ಕ್ಸಿ ಜಿನ್ ಪಿಂಗ್ ಅವರ ಆಹ್ವಾನದ ಮೇರೆಗೆ ಟಿಯಾಂಜಿನ್ ನಲ್ಲಿ ನಡೆಯಲಿರುವ ಶಾಂಘೈ ಸಹಕಾರ ಸಂಘಟನೆಯ ಶೃಂಗಸಭೆಯಲ್ಲಿ ಭಾಗವಹಿಸಲು ಪ್ರಧಾನಮಂತ್ರಿ ಅವರು ಇದೇ ೩೧ ರಿಂದ ಸೆಪ್ಟೆಂಬರ್ ೧ ರವರೆಗೆ ಚೈನಾಕ್ಕೆ ಪ್ರಯಾಣಿಸಲಿದ್ದಾರೆ. ಶೃಂಗಸಭೆಯ ಹೊರತಾಗಿ, ಶೃಂಗಸಭೆಯಲ್ಲಿ ಭಾಗವಹಿಸುವ ಹಲವಾರು ನಾಯಕರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಅವರು ದ್ವಿಪಕ್ಷೀಯ ಸಭೆಗಳನ್ನು ನಡೆಸುವ ನಿರೀಕ್ಷೆಯಿದೆ. ೨೦೧೭ರಿಂದ ಭಾರತ ಎಸ್ ಸಿಓ ಸದಸ್ಯ ರಾಷ್ಟ್ರವಾಗಿದೆ. ಇದು ೨೦೨೨-೨೩ರ ಅವಧಿಯಲ್ಲಿ ಎಸ್ ಸಿಓ ರಾಷ್ಟ್ರಗಳ ಮುಖ್ಯಸ್ಥರ ಮಂಡಳಿಯ ಅಧ್ಯಕ್ಷ ಸ್ಥಾನವನ್ನು ಹೊಂದಿತ್ತು.

<><><><>

ಪ್ರಧಾನ ಮಂತ್ರಿ ಜನ ಧನ ಯೋಜನೆ ಪಿಎಂಜೆಡಿವೈ ಇಂದಿಗೆ ೧೧ ವ?ಗಳನ್ನು ಪೂರೈಸುತ್ತದೆ. ಇದು ವಿಶ್ವದ ಅತಿದೊಡ್ಡ ಹಣಕಾಸು ಸೇರ್ಪಡೆ ಉಪಕ್ರಮಗಳಲ್ಲಿ ಒಂದಾಗಿದೆ. ಇದನ್ನು ಪ್ರಧಾನಿ ನರೇಂದ್ರ ಮೋದಿ ಅವರು, ೨೦೧೪ರ ಆಗಸ್ಟ್ ೧೫ ರಂದು ಕೆಂಪು ಕೋಟೆಯಿಂದ ಘೋಷಿಸಿದ್ದರು. ೨೦೧೪ರ ಆಗಸ್ಟ್ ೨೮ ರಂದು ಕಾರ್ಯಕ್ರಮವನ್ನು ಉದ್ಘಾಟಿಸುತ್ತಾ, ಪ್ರಧಾನ ಮಂತ್ರಿ ಈ ಸಂದರ್ಭವನ್ನು ಬಡವರ ವಿಮೋಚನೆಯನ್ನು ಆಚರಿಸುವ ಹಬ್ಬ ಎಂದು ಬಣ್ಣಿಸಿದ್ದರು. ಪ್ರಧಾನ ಮಂತ್ರಿ ಜನಧನ್ ಯೋಜನೆಯು ಆರ್ಥಿಕ ಸೇರ್ಪಡೆಯ ರಾಷ್ಟ್ರೀಯ ಯೋಜನೆಯಾಗಿದ್ದು, ಇದು ಸಮಗ್ರ ಆರ್ಥಿಕ ಸೇರ್ಪಡೆಯನ್ನು ತರಲು ಮತ್ತು ದೇಶದ ಎಲ್ಲಾ ಮನೆಗಳಿಗೆ ಬ್ಯಾಂಕಿಂಗ್ ಸೇವೆಗಳನ್ನು ಒದಗಿಸಲು ಸಮಗ್ರ ವಿಧಾನವನ್ನು ಹೊಂದಿದೆ. ಈ ಯೋಜನೆಯು ಮೂಲ ಉಳಿತಾಯ ಬ್ಯಾಂಕ್ ಖಾತೆಯ ಲಭ್ಯತೆ, ಅಗತ್ಯ ಆಧಾರಿತ ಸಾಲಕ್ಕೆ ಅವಕಾಶ, ಹಣ ರವಾನೆ ಸೌಲಭ್ಯ, ವಿಮೆ ಮತ್ತು ಪಿಂಚಣಿಯಂತಹ ವಿವಿಧ ಹಣಕಾಸು ಸೇವೆಗಳಿಗೆ ಲಭ್ಯತೆಯನ್ನು ಖಚಿತಪಡಿಸುತ್ತದೆ. ಪ್ರಧಾನ ಮಂತ್ರಿ ಜನಧನ್ ಯೋಜನೆಯು ಪ್ರತಿ ಮನೆಗೆ ಕನಿ? ಒಂದು ಮೂಲ ಬ್ಯಾಂಕಿಂಗ್ ಖಾತೆಯೊಂದಿಗೆ

ಬ್ಯಾಂಕಿಂಗ್ ಸೌಲಭ್ಯಗಳಿಗೆ ಸಾರ್ವತ್ರಿಕ ಪ್ರವೇಶ, ಆರ್ಥಿಕ ಸಾಕ್ಷರತೆ ಮತ್ತು ಕ್ರೆಡಿಟ್, ವಿಮೆ ಮತ್ತು ಪಿಂಚಣಿ ಸೌಲಭ್ಯಕ್ಕೆ ಅವಕಾಶವನ್ನು ಒದಗಿಸುತ್ತದೆ. ಇದು ನಗರ ಮತ್ತು ಗ್ರಾಮೀಣ ಪ್ರದೇಶಗಳನ್ನು ಒಳಗೊಳ್ಳುತ್ತದೆ ಮತ್ತು ಖಾತೆ ತೆರೆಯುವವರಿಗೆ ಸ್ಥಳೀಯ ಡೆಬಿಟ್ ಕಾರ್ಡ್ ಸೇವೆ ಒದಗಿಸಲಿದೆ. ಯಾವುದೇ ಬ್ಯಾಂಕ್ ಶಾಖೆ ಅಥವಾ ಬಿಸಿನೆಸ್ ಕರೆಸ್ಪಾಂಡೆಂಟ್ ಶಾಖೆಗಳು ಶೂನ್ಯ ಬ್ಯಾಲೆನ್ಸ್‌ನಲ್ಲಿ ಖಾತೆಯನ್ನು ತೆರೆಯಬಹುದು. ಪ್ರತಿಯೊಂದು ಬ್ಯಾಂಕ್ ಖಾತೆಯು ಬ್ಯಾಂಕುಗಳ ಕೋರ್ ಬ್ಯಾಂಕಿಂಗ್ ವ್ಯವಸ್ಥೆಯಲ್ಲಿರಲಿದೆ. ಮೂಲಭೂತ ವೈಶಿ? ಫೋನ್‌ಗಳಲ್ಲಿಯೂ ಲಭ್ಯವಿರುವ ಯುಎಸ್‌ಎಸ್‌ಡಿ ಸೌಲಭ್ಯವನ್ನು ಬಳಸಿಕೊಂಡು ಮೊಬೈಲ್ ಬ್ಯಾಂಕಿಂಗ್ ಅನ್ನು ಸಹ ಇದು ಬೆಂಬಲಿಸಲಾಗುತ್ತಿದೆ.

<><><><>

ಪ್ರಧಾನಿ ನರೇಂದ್ರ ಮೋದಿ ಅವರು ಫಿನ್ ಲ್ಯಾಂಡ್ ಅಧ್ಯಕ್ಷ ಅಲೆಕ್ಸಾಂಡರ್ ಸ್ಟಬ್ ಅವರೊಂದಿಗೆ ನಿನ್ನೆ ದೂರವಾಣಿ ಸಂಭಾಷಣೆ ನಡೆಸಿದರು. ಫಿನ್ಲೆಂಡ್ ಯುರೋಪಿಯನ್ ಒಕ್ಕೂಟದಲ್ಲಿ ಮೌಲ್ಯಯುತ ಪಾಲುದಾರ ಎಂದು ಪ್ರಧಾನಿ ಸಾಮಾಜಿಕ ಮಾಧ್ಯಮ ಪೋಸ್ಟ್ ನಲ್ಲಿ ತಿಳಿಸಿದ್ದಾರೆ. ವ್ಯಾಪಾರ, ತಂತ್ರಜ್ಞಾನ ಮತ್ತು ಸುಸ್ಥಿರತೆಯಂತಹ ಪ್ರಮುಖ ಕ್ಷೇತ್ರಗಳಲ್ಲಿ ಸಹಕಾರವನ್ನು ಬಲಪಡಿಸುವ ಮಾರ್ಗಗಳ ಬಗ್ಗೆ ಉಭಯ ನಾಯಕರು ಚರ್ಚಿಸಿದರು. ಉಕ್ರೇನ್ ನಲ್ಲಿನ ಸಂಘರ್ಷದ ಶಾಂತಿಯುತ ಪರಿಹಾರಕ್ಕಾಗಿ ನಡೆಯುತ್ತಿರುವ ಪ್ರಯತ್ನಗಳ ಬಗ್ಗೆ ಅವರು ದೃಷ್ಟಿಕೋನಗಳನ್ನು ವಿನಿಮಯ ಮಾಡಿಕೊಂಡಿದ್ದಾರೆ.

<><><><>

ಜಮ್ಮು ಪ್ರದೇಶ ಮತ್ತು ಉತ್ತರ ಪಂಜಾಬ್ ನಲ್ಲಿ ಪ್ರವಾಹ ಪರಿಸ್ಥಿತಿಯಿಂದಾಗಿ ಹೆಚ್ಚುತ್ತಿರುವ ನೀರಿನ ಮಟ್ಟ ಮತ್ತು ವಿನಾಶಕಾರಿ ಪ್ರವಾಹಕ್ಕೆ ಪ್ರತಿಕ್ರಿಯೆಯಾಗಿ ಭಾರತೀಯ ವಾಯುಪಡೆ ವ್ಯಾಪಕ ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಗಳನ್ನು ಪ್ರಾರಂಭಿಸಿದೆ. ಸಂತ್ರಸ್ತರ ಬೆಂಬಲಕ್ಕಾಗಿ ಭಾರತೀಯ ವಾಯುಪಡೆಯು ಹೆಲಿಕಾಪ್ಟರ್ ಫ್ಲೀಟ್, ಸಾರಿಗೆ ವಿಮಾನ ಮತ್ತು ಇತರ ಐಎಎಫ್ ಸ್ವತ್ತುಗಳನ್ನು ನಿಯೋಜಿಸಿದೆ ಎಂದು ರಕ್ಷಣಾ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಜಮ್ಮುವಿನ ಅಖ್ನೂರ್ ಪ್ರದೇಶ, ಪಠಾಣ್ಕೋಟ್ ಮತ್ತು ಪಂಜಾಬ್ ನ ಡೇರಾ ಬಾಬಾ ನಾನಕ್ ಪ್ರದೇಶದಲ್ಲಿ ಸಶಸ್ತ್ರ ಸಿಬ್ಬಂದಿಯ ಜೀವವನ್ನು ರಕ್ಷಿಸಲು ಮತ್ತು ರಕ್ಷಿಸಲು ನಡೆಸಿದ ರಕ್ಷಣಾ ಕಾರ್ಯಾಚರಣೆಗಳ ಬಗ್ಗೆಯೂ ಅದು ಗಮನಸೆಳೆದಿದೆ. ಪರಿಸ್ಥಿತಿ ವಿಕಸನಗೊಳ್ಳುತ್ತಿದ್ದಂತೆ ಹೆಚ್ಚಿನ ಕಾರ್ಯಾಚರಣೆಗಳನ್ನು ಕೈಗೊಳ್ಳಲು ಐಎಎಫ್ ಸಿದ್ಧವಾಗಿದೆ ಎಂದು ಸಚಿವಾಲಯ ತಿಳಿಸಿದೆ.

<><><><>

೨೦೩೦ರ ಕಾಮನ್ ವೆಲ್ತ್ ಕ್ರೀಡಾಕೂಟಕ್ಕೆ ಬಿಡ್ ಸಲ್ಲಿಸಲು ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯದ ಪ್ರಸ್ತಾವನೆಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ. ಬಿಡ್ ಅನ್ನು ಸ್ವೀಕರಿಸಿದರೆ ಸಂಬಂಧಿತ ಸಚಿವಾಲಯಗಳು, ಇಲಾಖೆಗಳು ಮತ್ತು ಪ್ರಾಧಿಕಾರಗಳಿಂದ ಅಗತ್ಯ ಖಾತರಿಗಳೊಂದಿಗೆ ಆತಿಥೇಯ ಸಹಯೋಗ ಒಪ್ಪಂದಕ್ಕೆ ಸಹಿ ಹಾಕಲು ಮತ್ತು ಗುಜರಾತ್ ಸರ್ಕಾರಕ್ಕೆ ಅಗತ್ಯ ಅನುದಾನವನ್ನು ಮಂಜೂರು ಮಾಡಲು ಅದು ಅನುಮೋದನೆ ನೀಡಿತು. ಕಾಮನ್ವೆಲ್ತ್ ಕ್ರೀಡಾಕೂಟದಲ್ಲಿ ೭೨ ದೇಶಗಳ ಕ್ರೀಡಾಪಟುಗಳು ಭಾಗವಹಿಸಲಿದ್ದಾರೆ. ಕ್ರೀಡಾಕೂಟದ ಸಮಯದಲ್ಲಿ ಭಾರತಕ್ಕೆ ಭೇಟಿ ನೀಡುವ ಹೆಚ್ಚಿನ ಸಂಖ್ಯೆಯ ಕ್ರೀಡಾಪಟುಗಳು, ತರಬೇತುದಾರರು, ತಾಂತ್ರಿಕ ಅಧಿಕಾರಿಗಳು, ಪ್ರವಾಸಿಗರು, ಮಾಧ್ಯಮ ವ್ಯಕ್ತಿಗಳು ಭಾಗವಹಿಸುವುದು, ಸ್ಥಳೀಯ ವ್ಯವಹಾರಗಳಿಗೆ ಪ್ರಯೋಜನ ಮತ್ತು ಆದಾಯವನ್ನು ಗಳಿಸುವುದು ಇದರಲ್ಲಿ ಸೇರಿದೆ.

<><><><>

ರಕ್ಷಣಾ ಸಚಿವಾಲಯ, ಮಾಜಿ ರಕ್ಷಣಾ ಸಿಬ್ಬಂದಿಯ ಪಿಂಚಣಿ, ಆರೋಗ್ಯ, ಪುನರ್ವಸತಿ ಮತ್ತು ಕಲ್ಯಾಣ ಸೇವೆ ಜಾರಿ ಬಲಪಡಿಸಲು ಭಾರತದ ಗುಣಮಟ್ಟ ಮಂಡಳಿಯೊಂದಿಗೆ ತಿಳಿವಳಿಕೆ ಪತ್ರಕ್ಕೆ ಸಹಿ ಹಾಕಿದೆ. ೬೩ ಲಕ್ಷಕ್ಕೂ ಅಧಿಕ ಹಿರಿಯ ಯೋಧರು ಹಾಗೂ ಅವರ ಅವಲಂಬಿತರಿಗೆ ಇದರಿಂದ ಸಹಾಯವಾಗಲಿದೆ. ಮಾಜಿ ಸೈನಿಕರ ಅಂಕೀಕೃತ ಮೌಲ್ಯಮಾಪನ, ಪರಿಣಾಮ ಲೆಕ್ಕಾಚಾರ, ಹಾಗೂ ಸಾಕ್ಷ್ಯ ಆಧಾರಿತ ನೀತಿ ಶಿಫಾರಸು ವಿಚಾರಗಳಲ್ಲಿ ಮಂಡಳಿ ಬೆಂಬಲ ನೀಡಲಿದೆ.

<><><><>

ಜೈವಿಕ ತಂತ್ರಜ್ಞಾನ ಕ್ಷೇತ್ರದಲ್ಲಿ ಭಾರತ ಮಾಡಿರುವ ಬಂಡವಾಳ ಹೂಡಿಕೆಯಿಂದಾಗಿ ಭವಿಷ್ಯದಲ್ಲಿ ಅತ್ಯುತ್ತಮ ಫಲಿತಾಂಶ ನಿರೀಕ್ಷಿಸಲಾಗಿದೆ ಎಂದು ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ಸಚಿವ ಡಾ. ಜಿತೇಂದ್ರ ಸಿಂಗ್ ಹೇಳಿದ್ದಾರೆ. ದೆಹಲಿಯಲ್ಲಿ ನಿನ್ನೆ ಅವರು, ಸುದ್ದಿಗಾರರೊಂದಿಗೆ ಮಾತನಾಡಿ, ಜೈವಿಕ ತಂತ್ರಜ್ಞಾನ ವಿಷಯ ಯುವ ಜನತೆಯ ಜನಪ್ರಿಯ ವಿಚಾರವಾಗಿದೆ ಎಂದು ಹೇಳಿದರು. ಈ ಕ್ಷೇತ್ರ ಬಾರೀ ಬೆಳವಣಿಗೆ ಸಾಮರ್ಥ್ಯ ಹೊಂದಿದ್ದು, ೨೦೩೦ರ ವೇಳೆಗೆ ಆರ್ಥಿಕತೆಗೆ ೩೦೦ ಶತಕೋಟಿ ಡಾಲರ್ ಕೊಡುಗೆ ನೀಡುವುದೆಂದು ನಿರೀಕ್ಷಿಸಲಾಗಿದೆ. ಈ ಕ್ಷೇತ್ರದಲ್ಲಿ ಮಾಡಲಾದ ಆವಿಷ್ಕಾರಗಳಿಂದ ವೈದ್ಯಕೀಯ ಉಪಚಾರ ಮತ್ತು ಸುಸ್ಥಿರ ಆಹಾರ ಪರ್ಯಾಯಗಳನ್ನು ಸೃಷ್ಟಿಸಲು ಸಾಧ್ಯವಾಗಿದೆ ಎಂದರು. ಎಕ್ಸಿಮ್-೪ ಬಾಹ್ಯಾಕಾಶ ಮಿಷನ್ ಸಂದರ್ಭದಲ್ಲಿ ಜೈವಿಕ ತಂತ್ರಜ್ಞಾನ ಕುರಿತು ನಡೆಸಲಾದ ಪ್ರಯೋಗಗಳನ್ನು ಪ್ರಸ್ತಾಪಿಸಿದ ಸಚಿವರು ಸಂಶೋಧನೆಗಳ ಫಲಶೃತಿ ಭಾರತಕ್ಕೆ ಮಾತ್ರವಲ್ಲ, ವಿಶ್ವಬಂಧು ಭಾರತದ ಪರಿಕಲ್ಪನೆಯನ್ನು ಸಾಕಾರಗೊಳಿಸುತ್ತದೆ ಎಂದರು.

<><><><>

ಛತ್ತೀಸ್ ಗಢದ ಬಿಜಾಪುರ ಜಿಲ್ಲೆಯಲ್ಲಿ ನಿನ್ನೆ ೩೦ ಮಾವೋವಾದಿಗಳು ಪೊಲೀಸರಿಗೆ ಶರಣಾಗಿದ್ದಾರೆ. ಅವರಲ್ಲಿ ಇಪ್ಪತ್ತು ಮಂದಿ ೮೧ ಲಕ್ಷ ರೂಪಾಯಿಗಳ ನಗದು ಬಹುಮಾನವನ್ನು ಸ್ವೀಕರಿಸಿದ್ದಾರೆ. ಶರಣಾಗತ ಮಾವೋವಾದಿಗಳು ವಿವಿಧ ಘಟನೆಗಳಲ್ಲಿ ಭಾಗಿಯಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

<><><><>

ದೇಶದ ೭ ರಾಜ್ಯಗಳಲ್ಲಿ ಇಂದು ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಒಡಿಶಾ, ಛತ್ತಿಸ್‌ಗಢ, ಆಂಧ್ರಪ್ರದೇಶ, ಕರಾವಳಿ, ತೆಲಂಗಾಣ, ಮಧ್ಯ ಮಹಾರಾಷ್ಟ್ರ, ಕೇರಳ, ಕರಾವಳಿ ಕರ್ನಾಟಕಗಳಲ್ಲಿ ಭಾರೀ ಮಳೆ ಬಿಳಲಿದೆ. ಮುಂದಿನ ೭ ದಿನಗಳ ಕಾಲ ವಾಯುವ್ಯ ಭಾರತದಲ್ಲಿ ಭಾರೀ ಮಳೆ ಮುಂದುವರೆಯಲಿದೆ. ಜಮ್ಮುವಿನ ಕೆಲ ಪ್ರದೇಶಗಳಲ್ಲಿ ಕಳೆದ ೨೪ ತಾಸುಗಳಲ್ಲಿ ೭೦ ವರ್ಷಗಳ ಕಾಲ ಅತ್ಯಧಿಕ ಮಳೆಯಾಗಿದೆ ಎಂದು ವರದಿಯಾಗಿದೆ.

<><><><>

ಅಮೆರಿಕದ ಮಿನ್ನಿಯಾಪೋಲಿಸ್‌ನ ಕ್ಯಾಥೋಲಿಕ್ ಚರ್ಚ್ ಮೇಲೆ ನಿನ್ನೆ ನಡೆದ ಗುಂಡಿನ ದಾಳಿಯಲ್ಲಿ ಇಬ್ಬರು ಮಕ್ಕಳು ಮೃತಪಟ್ಟಿದ್ದು, ೧೭ ಜನರು ಗಾಯಗೊಂಡಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>